ಡಾ: ಜಿ.ಪರಮೇಶ್ವರ (ಉನ್ನತ ಶಿಕ್ಷಣ ಸಚಿವರು) :

ಅ) ತಾತ್ವಿಕವಾಗಿ ಅನುಮೋದಿಸಿದ್ದರು.

ಆ) ಸಧ್ಯಕ್ಕೆ ಇಲ್ಲ.

ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಿಗೆ ಶೌಚಾಲಯ

1962 (2200) ಶ್ರೀ ಕೌಜಲಗಿ ಮಹಾಂತೇಶ ಶಿವಾನಂದ (ಬೈಲಹೊಂಗಲ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಪ್ರಾಥಮಿಕ ಶಾಲೆಗಳಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳಿಗೆ ಶಾಲೆಯ ಆವರಣ ಸಮೀಪ ಮೂತ್ರಾಲಯ ಹಾಗೂ ಶೌಚಾಲಯ ಕಟ್ಟಲು ಸರ್ಕಾರವು ವಿಶೇಷ ಕಾರ್ಯಕ್ರಮ ಹಾಕಿಕೊಳ್ಳಲಾಗಿದೆಯೇ? ವಿವರ ಒದಗಿಸುವುದು;

ಆ) ಬೆಳಗಾವಿ ಜಿಲ್ಲೆಯಲ್ಲಿ ಪ್ರಾಥಮಿಕ ಶಾಲೆಗಳ ಆವರಣ ಸಮೀಪ ಎಷ್ಟು ಶಾಲೆಗಳಲ್ಲಿ ಮೂತ್ರಾಲಯ ಹಾಗೂ ಶೌಚಾಲಯ ಇರುತ್ತದೆ ಹಾಗೂ ಎಷ್ಟು ಶಾಲೆಗಳಲ್ಲಿ ಇರುವುದಿಲ್ಲ;

ಇ) ಹಾಗಿದ್ದಲ್ಲಿ ಮೂತ್ರಾಲಯ ಹಾಗೂ ಶೌಚಾಲಯ ಕಟ್ಟಲು ಯಾವ ವಿಶೇಷ ಕಾರ್ಯಕ್ರಮ ಹಾಕಿಕೊಳ್ಳಲಾಗಿದೆ ಮತ್ತು ಇದಕ್ಕೆ ಎಷ್ಟು ಹಣಬೇಕಾಗುವುದು?

ಶ್ರೀ ಹೆಚ್.ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ಪ್ರತಿ ವರ್ಷ ರಾಜ್ಯದಲ್ಲಿ ಮುಂದುವರೆದ ಯೋಜನೆಯಡಿಯಲ್ಲಿ ಶಾಲೆಗಳಿಗೆ ಶೌಚಾಲಯ ನಿರ್ಮಾಣ ಮಾಡಲು ವಿಶೇಷ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. 1995-96 ರಿಂದ 1999-2000ನೇ ಸಾಲಿನವರೆಗೆ 352.36 ಲಕ್ಷ ರೂ.ಗಳ ಅನುದಾನ ಬಿಡುಗಡೆ ಮಾಡಿದ್ದು 897 ಶೌಚಾಲಯಗಳನ್ನು ನಿರ್ಮಾಣ ಮಾಡಲಾಗಿದೆ.

ಆ) 320 ಶಾಲೆಗಳಲ್ಲಿ ಈ ಸೌಲಭ್ಯ ಇದೆ. ಇನ್ನು 2502 ಶಾಲೆಗಳಲ್ಲಿ ಶೌಚಾಲಯ ವ್ಯವಸ್ಥೆ ಇರುವುದಿಲ್ಲ.

ಇ) ರಾಜ್ಯದ ವಿಶೇಷ ಕಾರ್ಯಕ್ರಮದಡಿ ಹಂತಹಂತವಾಗಿ ಶೌಚಾಲಯಗಳನ್ನು ನಿರ್ಮಾಣ ಮಾಡಲಾಗುತ್ತಿದೆ.

ಪ್ರಾಥಮಿಕ ಶಾಲೆಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ

1963 (2201) ಶ್ರೀ ಕೌಜಲಗಿ ಮಹಂತೇಶ ಶಿವಾನಂದ (ಬೈಲಹೊಂಗಲ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ರಾಜ್ಯದ ಪ್ರಾಥಮಿಕ ಶಾಲೆಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗಿದೆಯೇ;